ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 24-03-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | **27ನೇ ರಾಷ್ಟ್ರೀಯ ಭೂಮಾಪನ ದಿನಾಚರಣೆ ಕ್ರೀಡಾ ಸಮಿತಿ – 2016:**<br><br>**ಉದ್ಘಾಟನೆ:**<br><br>ಶ್ರೀ ಮುನೀಶ್ ಮೌದ್ಗಿಲ್,<br>ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು<br><br>**ಅಧ್ಯಕ್ಷತೆ:**<br><br>ಶ್ರೀ ಕೃಷ್ಣಮೂರ್ತಿ ಗೋಪಾಲ್, ಭೂದಾಖಲೆಗಳ ಹೆಚ್ಚುವರಿ ನಿರ್ದೇಶಕರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು<br><br>**ಮುಖ್ಯ ಅತಿಥಿ:**<br><br>ಶ್ರೀ ಬ್ರಿಜೇಶ್ ಪಟೇಲ್,<br>ಮಾಜಿ ಖ್ಯಾತ ಅಂತರಾಷ್ಟ್ರೀಯ ಕ್ರಿಕೆಟ್ ಆಟಗಾರರು, ಗೌರವ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್, ಬೆಂಗಳೂರು. | 25-03-2015<br>ಶುಕ್ರವಾರ<br>ಬೆಳಿಗ್ಗೆ<br>9-00 ಗಂಟೆಗೆ | ವೈ.ಎಂ.ಸಿ.ಎ. ಮೈದಾನ, ನೃಪತುಂಗ ರಸ್ತೆ, ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಪಕ್ಕ, ಬೆಂಗಳೂರು – 560 002 |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಸಚಿವರ ಪ್ರವಾಸ

**ಬೆಂಗಳೂರು, ಮಾರ್ಚ್ 24 (ಕರ್ನಾಟಕ ವಾರ್ತೆ)**

**ಸಹಕಾರ ಸಚಿವ ಹೆಚ್. ಎಸ್. ಮಹದೇವ ಪ್ರಸಾದ್ ಅವರು ಮಾರ್ಚ್ 25 ರಿಂದ 28 ರವರೆಗೆ ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಮಾರ್ಚ್ 28 ರಂದು ನಗರಕ್ಕೆ ಹಿಂದಿರುಗಲಿದ್ದಾರೆ.**

**ಬಾಬು:ಜಿಪಿಆರ್.**

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

**ಬೆಂಗಳೂರು, ಮಾರ್ಚ್ 24 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 27-03-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಶ್ರೀ ಹಣಮಂತ ಸಂಕಲೂರ ಮತ್ತು ತಂಡ, ಕಲಬುರಗಿ ಜಿಲ್ಲೆರವರಿಂದ ಜಾನಪದ ಮತ್ತು ಭಾವಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಕುಮಾರಿ ಸ್ವಪ್ನ ಮತ್ತು ತಂಡ, ಬೆಂಗಳೂರು ಗ್ರಾಮಾಂತರ ಜಿಲ್ಲೆರವರಿಂದ ರಂಗಗೀತೆ ಮತ್ತು ಭಾವಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3. ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ–ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಪ್ರಣವ್ ಸ್ವರೂಪ್. ಬಿ. ಎನ್. ರವರಿಂದ ವೈಲಿನ್ ವಾದನ ಮತ್ತು ಅಶ್ವಿನ್ ನಾಯರ್ ರವರಿಂದ ಮೃದಂಗಂ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 08.00 ಗಂಟೆಯಿಂದ 09.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ರಂಗಮಡಿಲು ಕಲಾಸಂಸ್ಥೆ, ಬೆಂಗಳೂರುರವರ ವತಿಯಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 09.00 ಗಂಟೆಯಿಂದ 10.00 ಗಂಟೆಯವರೆಗೆ ವಾಣಿ ಸ್ಕೂಲ್, ಮಾಗಡಿ ರಸ್ತೆ ಬೆಂಗಳೂರು ರವರ ವಿದ್ಯಾರ್ಥಿಗಳಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

**ಬಾಬು:ಜಿಪಿಆರ್.**